# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 83 |
| ಸದಸ್ಯರ ಹೆಸರು | : | ಡಾ: ಎಂ.ಜಿ. ಮುಳೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27.01.2026 |
| ಉತ್ತರಿಸುವ ಸಚಿವರು | : | ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು. |

<table>
<tr><th>ಕ್ರ.<br>ಸಂ.</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹೊಸ ಕೈಗಾರಿಕಾ ವಸಾಹತುಗಳನ್ನು (Industrial Estates) ಸ್ಥಾಪಿಸಲಾಗಿದೆ; ಈ ವಸಾಹತುಗಳಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ, ನೀರು ಮತ್ತು ವಿದ್ಯುತ್ ಕಲ್ಪಿಸಲು ವ್ಯಯಿಸಲಾದ ಮೊತ್ತವೆಷ್ಟು;</td><td>ಕಳೆದ ಮೂರು ವರ್ಷಗಳಿಂದ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಆಂತರಿಕ ಸಂಪನ್ಮೂಲಗಳಿಂದ ಈ ಕೆಳಕಂಡ ಸ್ಥಳಗಳಲ್ಲಿ ಹೊಸ ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಲಾಗುತ್ತಿದ್ದು, ವಿವರಗಳು ಈ ಕೆಳಕಂಡಂತಿದೆ:
<table>
<tr><th>ಕ್ರ.<br>ಸಂ</th><th>ಕೈಗಾರಿಕಾ ವಸಾಹತು</th><th>ಈವರೆಗೂ ವ್ಯಯಿಸಲಾದ ಮೊತ್ತ<br>(ರೂ. ಲಕ್ಷಗಳಲ್ಲಿ)</th></tr>
<tr><td>1</td><td>ಹೊಸ ಕೈಗಾರಿಕಾ ವಸಾಹತು ಸ್ಥಾಪನೆ – ಚಿತ್ತಾಪುರ ಪೇಟ್, ಚಿತ್ತಾಪುರ ತಾಲ್ಲೂಕು, ಕಲಬುರ್ಗಿ ಜಿಲ್ಲೆ. (31.03 ಎಕರೆಗಳು)</td><td>1989.77</td></tr>
<tr><td>2</td><td>ಹೊಸ ಕೈಗಾರಿಕಾ ವಸಾಹತು ಸ್ಥಾಪನೆ – ಕಣಗಾಲ ಗ್ರಾಮ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ. (25.00 ಎಕರೆಗಳು)</td><td>1461.47</td></tr>
<tr><td>3</td><td>ಹೊಸ ಕೈಗಾರಿಕಾ ವಸಾಹತು ಸ್ಥಾಪನೆ – ಕೋಡ್ಕಣಿ- ಮಳಲವಳ್ಳಿ ಗ್ರಾಮ, ಸಿದ್ದಾಪುರ ತಾಲ್ಲೂಕು, ಉತ್ತರಕನ್ನಡ ಜಿಲ್ಲೆ. (47.06 ಎಕರೆಗಳು)</td><td>2178.25</td></tr>
<tr><td>4</td><td>ಹೊಸ ಕೈಗಾರಿಕಾ ವಸಾಹತು ಸ್ಥಾಪನೆ – ಬದನಗುಪ್ಪೆ- ಕೆಲ್ಲಂಬಳ್ಳಿ ಗ್ರಾಮ, ಚಾಮರಾಜನಗರ ತಾಲ್ಲೂಕು, ಚಾಮರಾಜನಗರ ಜಿಲ್ಲೆ.<br>(25.00 ಎಕರೆಗಳು)</td><td>1128.25</td></tr>
<tr><td>5</td><td>ಹೊಸ ಕೈಗಾರಿಕಾ ವಸಾಹತು ಸ್ಥಾಪನೆ – ಬೂದಿಹಾಳ ಗ್ರಾಮ ಬಳ್ಳೊಳ್ಳಿ ಹೋಬಳಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ. (19.38 ಎಕರೆಗಳು)</td><td>1027.05</td></tr>
</table>
ಸದರಿ ಕೈಗಾರಿಕಾ ವಸಾಹತುಗಳ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ.</td></tr>
<tr><td>ಆ)</td><td>ಕೆ.ಎಸ್.ಎಸ್.ಐ.ಡಿ.ಸಿ. ವತಿಯಿಂದ ಹಂಚಿಕೆಯಾದ ಕೈಗಾರಿಕಾ ಶೆಡ್‌ಗಳು ಮತ್ತು ನಿವೇಶನಗಳ ನೋಂದಣಿ ಪ್ರಕ್ರಿಯೆ (Lease-cum-Sale) ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ಸರಳಗೊಳಿಸಲು ಕೈಗೊಂಡಿರುವ ಕ್ರಮಗಳೇನು?</td><td>ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ವತಿಯಿಂದ ಕೈಗಾರಿಕಾ ಮಳಿಗೆ ಮತ್ತು ನಿವೇಶನಗಳ ಹಂಚಿಕೆ ಕುರಿತಂತೆ ಹಂಚಿಕೆದಾರರು ಭೂಮೌಲ್ಯದ ಪೂರ್ಣ ಹಣವನ್ನು ನಿಗಮಕ್ಕೆ ರೇವಣಿ ಮಾಡಿದ ಕೂಡಲೇ ನಿಯಮಾನುಸಾರ ಗುತ್ತಿಗೆ ಕರಾರು ಪತ್ರವನ್ನು ನೆರವೇರಿಸಲು ಆದ್ಯತೆ ಮೇರೆಗೆ ಕ್ರಮ ವಹಿಸಲಾಗುತ್ತಿದೆ. ಸದರಿ ಗುತ್ತಿಗೆ ಕರಾರುಪತ್ರ ನೋಂದಣಿ ಕುರಿತಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅಭಿವೃದ್ಧಿಪಡಿಸಿರುವ ಇ-ಖಾತಾ ತಂತ್ರಾಂಶದಲ್ಲಿ ತಾಂತ್ರಿಕ ದೋಷದಿಂದಾಗಿ ಕೆಲವೆಡೆ ನೋಂದಣಿ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿದ್ದು ಸದರಿ ತಾಂತ್ರಿಕ ದೋಷವನ್ನು ಸರಿಪಡಿಸಲು ಸಂಬಂಧಪಟ್ಟ ಇಲಾಖೆಯಿಂದ ಅಗತ್ಯ ಕ್ರಮ ವಹಿಸುತ್ತಿರುವುದಾಗಿ ತಿಳಿದುಬಂದಿದೆ.</td></tr>
</table>

ಸಿಐ 26 ಸಿಎಸ್‌ಸಿ 2026

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ
ಸಚಿವರು.